# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/33/2021-22 ದಿನಾಂಕ: 19-02-2022.

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21, ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ. 10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 19-02-2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಜೂಮ್ ಅಪ್ಲಿಕೇಷನ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀಮತಿ. ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು
3. ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿಗಳು,
4. ಶ್ರೀ. ಪ್ರವೀಣ್, ಹಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ. ಬಾಬುರೆಡ್ಡಿ, ವಿದ್ಯುತ್ ವಿಭಾಗ, ಬಿಬಿಎಂಪಿ
6. ಶ್ರೀ. ದಯಾಳ್, ಸದಸ್ಯರು,
7. ಶ್ರೀ ಎಂ. ಶ್ರೀನಿವಾಸ್, ಸದಸ್ಯರು,
8. ಶ್ರೀ. ಗೋಪಾಲಕೃಷ್ಣ, ಸದಸ್ಯರು,
9. ಶ್ರೀ. ಮಾಲಾದ್ರಿ, ಸದಸ್ಯರು,
10. ಶ್ರೀ. ಸುರೇಶ್, ಸದಸ್ಯರು,

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸಭೆಯನ್ನು ಪ್ರಾರಂಭಿಸಿದರು. ಹಿಂದಿನ ಸಭೆಯ ನಡವಳಿಯನ್ನು ಸಭೆಯಲ್ಲಿ ಓದಿ, ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ದಿನಾಂಕ: 19-02-2022 ರ ಸಭೆಯ ನಡಾವಳಿಗಳು:**

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:-**

- ವಿದೇಶದಿಂದ ಯಾವುದೇ ಪ್ರಯಾಣಿಕರು ಅಥವಾ ಹೊರ ರಾಜ್ಯಗಳಿಂದ ಜನರು ಬಂದಿದ್ದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿಗೆ ತಿಳಿಸಿ ಪರೀಕ್ಷೆ ನಡೆಸಲು ಸಹಕರಿಸುವಂತೆ ಸಾರ್ವಜನಿಕರಲ್ಲಿ ಕೋರಿರುತ್ತಾರೆ.
- ಮುಂದಿನ ದಿನಗಳಲ್ಲಿ ಸರ್ಕಾರದ ವತಿಯಿಂದ ಸಾರ್ವಜನಿಕರಿಗೆ ಬೂಸ್ಟರ್ ಡೋಸ್ ವ್ಯಾಕ್ಸಿನೇಷನ್ ನೀಡಲು ತೀರ್ಮಾನಿಸಿದ್ದು, ಸಾರ್ವಜನಿಕರು 2ನೇ ಡೋಸ್ ಪಡೆದು 9 ತಿಂಗಳು ಮುಗಿದ ನಂತರ ಬೂಸ್ಟರ್ ಡೋಸ್ ಪಡೆಯಲು ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ವ್ಯಾಕ್ಸಿನೇಷನ್ ಪ್ರಮಾಣ ಪತ್ರ ಸಲ್ಲಿಸುವುದು ಕಡ್ಡಾಯವೆಂದು ವೈದ್ಯಾಧಿಕಾರಿಗಳು ಸೂಚಿಸಿರುತ್ತಾರೆ.
- ಯಾವುದೇ ವ್ಯಕ್ತಿಗೆ ಕೋವಿಡ್ ಪಾಸಿಟಿವ್ ಬಂದಿದ್ದಲ್ಲಿ, ಗುಣಮುಖರಾದ 90 ದಿನಗಳ ನಂತರ ವ್ಯಾಕ್ಸಿನೇಷನ್ ನೀಡಲಾಗುವುದು ಎಂದು ತಿಳಿಸಿದರು.

**ಬೀದಿ ದೀಪಗಳ ನಿರ್ವಹಣೆ ಕುರಿತು:**

- ಎಲೆಕ್ಟ್ರಿಕಲ್ ಗುತ್ತಿಗೆದಾರರಿಂದ ವಾರ್ಡ್ ವ್ಯಾಪ್ತಿಯ ಹಾಳಾಗಿರುವ ಬೀದಿ ದೀಪಗಳ ಕಂಬಗಳ ಬದಲಾವಣೆ ಕಾರ್ಯವನ್ನು ಮಾಡಿಸಲಾಗುತ್ತಿರುತ್ತದೆ ಮತ್ತು ಹಿಂದಿನ ಸಭೆಗಳಲ್ಲಿ ಸಾರ್ವಜನಿಕರಿಂದ ಸ್ವೀಕರಿಸಲಾಗಿದ ಸಮಸ್ತೆಗಳು/ ದೂರುಗಳನ್ನು ಪರಿಹರಿಸಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ಬಾಬುರೆಡ್ಡಿ, ಎಲೆಕ್ಟ್ರಿಕಲ್ ರವರು ಸಭೆಗೆ ತಿಳಿಸಿರುತ್ತಾರೆ.

**ಕಾವೇರಿ ನೀರು ಸರಬರಾಜು ಕುರಿತು:**

ದೊಡ್ಡಬೊಮ್ಮಸಂದ್ರ ವ್ಯಾಪ್ತಿಯ ಗ್ಯಾಸ್ ಗೌಡಾನ್ ಪ್ರದೇಶ, ಚಾಮುಂಡೇಶ್ವರ ಬಡಾವಣೆ ಮತ್ತು ಆರ್.ಆರ್. ಶಾಲೆ ಹತ್ತಿರ ಕಾವೇರಿ ನೀರು ಸರಬರಾಜು ವ್ಯತ್ಯಯವಾಗಿದ್ದು, ಇದನ್ನು ಸರಿಪಡಿಸಲು ಸಾರ್ವಜನಿಕರು ಮನವಿ ಮಾಡಿರುತ್ತಾರೆ.

ಬಿ.ಡಬ್ಲ್ಯು.ಎಸ್.ಎಸ್.ಬಿ ಇಂಜಿನಿಯರ್ ರವರು ಸಭೆಯಲ್ಲಿ ಮಾತನಾಡಿ ಪ್ರಸ್ತುತ ನೀರು ಸರಬರಾಜು ಕಾರ್ಯದಲ್ಲಿ ವ್ಯತ್ಯಯವಾಗಿದ್ದು, ಮುಂದಿನ ದಿನಗಳಲ್ಲಿ ಸಮಸ್ಯೆಯನ್ನು ಪರಿಹರಿಸಲಾಗುವುದು ಎಂದು ತಿಳಿಸಿದರು.

**ಘನತ್ಯಾಜ್ಯ ನಿರ್ವಹಣೆ:**

ವಾರ್ಡ್ ಸಂಖ್ಯೆ: 10 ದೊಡ್ಡಬೊಮ್ಮಸಂದ್ರ ವಾರ್ಡಿನಲ್ಲಿ ಘನತ್ಯಾಜ್ಯ ನಿರ್ವಹಣೆ ಕಾರ್ಯವು ಸಮರ್ಪಕವಾಗಿ ನಿರ್ವಹಿಸುತ್ತಿದ್ದು, ಈ ಬಗ್ಗೆ ಸಾರ್ವಜನಿಕರು ಮತ್ತು ಮೇಲಾಧಿಕಾರಿಗಳು ಪ್ರಶಂಸೆ ವ್ಯಕ್ತಪಡಿಸಿರುತ್ತಾರೆ.

ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

19/3/2022

ನೋಡೆಲ್ ಅಧಿಕಾರಿ ವಾರ್ಡ್–10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ಆಯುಕ್ತರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
5. ಆರೋಗ್ಯ ವೈದ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರಿಗೆ ಸಲ್ಲಿಸಿ ಸಭೆಗೆ ಹಾಜರಾಗಲು ಕೋರಿದೆ.
6. ಸಹಾಯಕ ಕಂದಾಯ ಅಧಿಕಾರಿಗಳು, ಕಂದಾಯ ವಿಭಾಗ, ವಿದ್ಯಾರಣ್ಯಪುರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿದ್ಯಾರಣ್ಯಪುರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಸಂಚಾರ) ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಲಾ ಮತ್ತು ಆರ್ಡರ್) ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14. ಕಛೇರಿ ಕಡತಕ್ಕೆ.